# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1348
2. ಮಾನ್ಯ ಸದಸ್ಯರ ಹೆಸರು : ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 15/3/2021
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಎಷ್ಟಿವೆ; ಅವು ಯಾವುವು; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು) | <u>ಕಾರ್ಮಿಕ ಇಲಾಖೆಯ ಅಧೀನದಲ್ಲಿ 4 ಮಂಡಳಿಗಳು ಹಾಗೂ 2 ಸೊಸೈಟಿಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳ ವಿವರಗಳು ಈ ಕೆಳಗಿನಂತಿದೆ:</u><br><br>1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-<br><u>ವಿಳಾಸ</u>: ಕಲ್ಯಾಣ ಸುರಕ್ಷಾ ಭವನ, ಐ.ಟಿ.ಐ ಕಾಪೌಂಡ್, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.<br><u>ದೂರವಾಣಿ ಸಂಖ್ಯೆ :</u> 080-26644312, 26644314, 26644315, 29753350<br><u>ಟೋಲ್ ಫ್ರೀ</u> : ಸಂಖ್ಯೆ 18004252992<br><u>ವೆಬ್ ಸೈಟ್</u> : <u>www.karbwwb.com</u><br><u>ಇ-ಮೇಲ್ :</u><br><u>karbuildworkerswelfare@gmail.com</u><br><br>2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-<br><u>ವಿಳಾಸ</u>: ಕಲ್ಯಾಣ ಸುರಕ್ಷಾ ಭವನ, 3ನೇ ಮಹಡಿ, ಐ.ಟಿ.ಐ ಕಾಂಪೌಂಡ್, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.<br><u>ದೂರವಾಣಿ ಸಂಖ್ಯೆ</u>:080-29759983/ 29758883<br><u>ವೆಬ್ ಸೈಟ್</u> : <u>ksuwssb.karnataka.gov.in</u><br><u>ಇ-ಮೇಲ್ : kuwssb@gmail.com</u><br><br>3. ಕರ್ನಾಟಕ ರಾಜ್ಯ ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆ (ಆಶಾ ದೀಪ ಯೋಜನೆ) ಸೊಸೈಟಿ:- |

| | | |
|---|---|---|
| | | <u>ವಿಳಾಸ</u>: ಕಲ್ಯಾಣ ಸುರಕ್ಷಾ ಭವನ, 3ನೇ ಮಹಡಿ, ಐ.ಟಿ.ಐ ಕಾಂಪೌಂಡ್, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.<br><u>ದೂರವಾಣಿ ಸಂಖ್ಯೆ :</u> 080-29759983 / 29758883<br><u>ವೆಬ್ ಸೈಟ್</u> : www.ashadeepa.in<br><u>ಇ-ಮೇಲ್ : ashadeepa29@gmail.com</u><br><br>**4. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-**<br><u>ವಿಳಾಸ:</u> ಕಾರ್ಮಿಕ ಕಲ್ಯಾಣ ಭವನ, ನಂ.48, 2ನೇ ಮಹಡಿ ಮತ್ತಿಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022.<br><u>ದೂರವಾಣಿ ಸಂಖ್ಯೆ :</u> **080-23570266**<br><u>ವೆಬ್ ಸೈಟ್</u> : www.klwb-kar.com<br><u>ಇ-ಮೇಲ್ :</u><br>welfarecommissioner123@gmail.com<br><br>**5. ಕರ್ನಾಟಕ ರಾಜ್ಯ ಬಾಲಕಾರ್ಮಿಕ ಪದ್ಧತಿ ನಿರ್ಮೂಲನಾ ಯೋಜನಾ ಸೊಸೈಟಿ:-**<br><u>ವಿಳಾಸ</u>: ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ನೆಲಮಹಡಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.<br><u>ದೂರವಾಣಿ ಸಂಖ್ಯೆ :</u> 080-29752833 / 26086117<br><u>ಇ-ಮೇಲ್ : kscleps@gmail.com</u><br><br>**6. ಕರ್ನಾಟಕ ರಾಜ್ಯ ಕನಿಷ್ಠ ವೇತನಾ ಸಲಹಾ ಮಂಡಳಿ:-**<br><u>ವಿಳಾಸ</u>: ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.<br><u>ದೂರವಾಣಿ ಸಂಖ್ಯೆ :</u> 080-26086230<br><u>ಇ-ಮೇಲ್ :</u> ksmwab@gmail.com<br><br>**7. ಕರ್ನಾಟಕ ಕಾರ್ಮಿಕ ಅಧ್ಯಯನ ಸಂಸ್ಥೆ:**<br>ವಿಳಾಸ: ಮಂಜುನಾಥ ನಗರ, ಹಿರಿಯ ಸರ್ಕಾರಿ ಪ್ರಾಥಮಿಕ ಶಾಲೆ ಹತ್ತಿರ, ಬಾಗಲಗುಂಟೆ, ಬೆಂಗಳೂರು. |

| | | |
|---|---|---|
| | | ಇ–ಮೇಲ್: ksli.director@gmail.com |
| ಆ) | ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನಾವಾರು ವಿವರವಾದ ಮಾಹಿತಿ ನೀಡುವುದು) | 1. <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u> ಈ ಮಂಡಳಿಯಲ್ಲಿ ನೋಂದಾಯಿತರಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಈ ಕೆಳಕಂಡ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಿ ಜಾರಿಗೊಳಿಸಲಾಗುತ್ತಿದೆ. ವಿವರಗಳನ್ನು **<u>ಅನುಬಂಧ–1 ರಲ್ಲಿ ನೀಡಿದೆ.</u>**<br><br>2. <u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u> ಈ ಮಂಡಳಿಯ ಮೂಲಕ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ:–<br><br>(1) <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:–</u> ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಮತ್ತು ಕ್ಲೀನರ್‌ಗಳು ಫಲಾನುಭವಿಗಳಾಗಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>(ಅ) <u>ಅಪಘಾತ ಪರಿಹಾರ ಸೌಲಭ್ಯ:</u> ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದವರಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>(ಆ) <u>ಶೈಕ್ಷಣಿಕ ಧನ ಸಹಾಯ:</u>ಅಪಘಾತದ ಕಾರಣ ನಿಧನರಾದ ಹಾಗೂ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿ ಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/– ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. |

| | | |
|---|---|---|
| | | (ಇ) ಸ್ಮಾರ್ಟ್ ಕಾರ್ಡ್ ಸೌಲಭ್ಯ : ಯೋಜನೆಯ ಕುರಿತು ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸಲು ಎಲ್ಲಾ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-<br>(ಅ) "ಸ್ಮಾರ್ಟ್ ಕಾರ್ಡ್":- ಪ್ರಸ್ತುತ ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>(ಆ) ಕಾರ್ಮಿಕ ಸೇವಾ ಕೇಂದ್ರ :-<br>ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 9ರನ್ವಯ ಫಲಾನುಭವಿಗಳಲ್ಲಿ ಅಸಂಘಟಿತ ಕಾರ್ಮಿಕರಿಗೆ ಲಭ್ಯವಿರುವ ಎಲ್ಲಾ ಯೋಜನೆಗಳ ಕುರಿತು ಮಾಹಿತಿ ನೀಡಲು, ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಅವಶ್ಯಕವಿರುವ ದಾಖಲಾತಿಗಳನ್ನು ಸಿದ್ಧಪಡಿಸಲು ಹಾಗೂ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಪಟ್ಟವರಿಗೆ ರವಾನಿಸಲು, ಸಹಾಯ ನೀಡಲು ರಾಜ್ಯದ 169 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದೆ. ಸದರಿ ಕೇಂದ್ರಗಳಲ್ಲಿ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ನೇಮಕಗೊಂಡ ಕಾರ್ಮಿಕ ಬಂಧುಗಳು ಕಾರ್ಯನಿರ್ವಹಿಸುತ್ತಿದ್ದಾರೆ.<br><br>(3) (ಅ)ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್‌ಧನ್ ಯೋಜನೆ (ಪಿಎಂ-ಎಸ್‌ವೈಎಂ):-<br>ಕೇಂದ್ರ ಸರ್ಕಾರದ ಈ ಯೋಜನೆಯಡಿ 18 - 40 ವರ್ಷ ವಯೋಮಾನದ ಅಸಂಘಟಿತ ಕಾರ್ಮಿಕರು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- |

| | | |
|---|---|---|
| | | ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ. 55/- ರಿಂದ ರೂ. 200/- ರವರೆಗೆ ವಂತಿಕೆ ಪಾವತಿಸಬೇಕಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರವು ಸಹ ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ.<br><br>(ಆ) <u>ನ್ಯೂ ಪೆನ್ಷನ್ ಸ್ಕೀಮ್ ಫಾರ್ ಟ್ರೇಡರ್ಸ್ ಅಂಡ್ ಸೆಲ್ಫ್ ಎಂಪ್ಲಾಯ್ಡ್ ಪರ್ಸನ್ಸ್</u>:-<br>ಕೇಂದ್ರ ಸರ್ಕಾರದ ಈ ಯೋಜನೆಯಡಿ 18 ರಿಂದ 40 ವರ್ಷ ವಯೋಮಾನದ ಅಂಗಡಿ ಮಾಲೀಕರು, ಚಿಲ್ಲರೆ ವ್ಯಾಪಾರಿಗಳು, ಅಕ್ಕಿ ಗಿರಣಿ ಮಾಲೀಕರು, ಎಣ್ಣೆ ಗಿರಣಿ ಮಾಲೀಕರು, ವರ್ಕ್‌ಶಾಪ್ ಮಾಲೀಕರು, ಕಮಿಷನ್ ಏಜೆಂಟ್ಸ್, ರಿಯಲ್ ಎಸ್ಟೇಟ್‌ನ ಬ್ರೋಕರ್ಸ್, ಸಣ್ಣ ಹೋಟೆಲ್ ಹಾಗೂ ರೆಸ್ಟೋರೆಂಟ್‌ನ ಮಾಲೀಕರು ಹಾಗೂ ಅಂತಹ ಇತರೆ ಸಣ್ಣ ವ್ಯಾಪಾರಗಳಲ್ಲಿ ತೊಡಗಿಸಿಕೊಂಡ ವ್ಯಾಪಾರಿಗಳು/ಲಘು ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ. 55/- ರಿಂದ ರೂ. 200/- ರವರೆಗೆ ವಂತಿಕೆ ಪಾವತಿಸಬೇಕಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರವು ಸಹ ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ.<br><br>3. **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ</u>** ಈ ಮಂಡಳಿಯವತಿಯಿಂದ ಸಂಘಟಿತ ಕಾರ್ಮಿಕರಿಗೆ ಈ ಕೆಳಕಂಡ ಯೋಜನೆಗಳನ್ನು ನೀಡಲಾಗುತ್ತಿದೆ.<br>1. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2. ವೈದ್ಯಕೀಯ ನೆರವು.<br>3. ಅಪಘಾತ ಧನ ಸಹಾಯ.<br>4. ಮೃತ ಕಾರ್ಮಿಕರ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ.<br>5. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರಕ್ಕೆ ಧನ |

| | | |
|---|---|---|
| | | ಸಹಾಯ.<br>6. ವಾರ್ಷಿಕ ಕ್ರೀಡಾಕೂಟ ಹಮ್ಮಿಕೊಳ್ಳುವ ಕಾರ್ಮಿಕ ಸಂಘಟನೆಗೆ ಧನ ಸಹಾಯ.<br><br>ಯೋಜನಾವಾರು ಮಾಹಿತಿಯನ್ನು **ಅನುಬಂಧ-2 ರಲ್ಲಿ** ಲಗತ್ತಿಸಿದೆ. |
| ಇ) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಎಷ್ಟು ಕಾರ್ಮಿಕ ನಿಧಿ ಹಣವಿದೆ; ಇದನ್ನು ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ಹಾಗೂ ಉಳಿದಿರುವ ಹಣವೆಷ್ಟು; | **1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ** ಕಲ್ಯಾಣ ನಿಧಿಯಲ್ಲಿ 2007 ರಿಂದ ಇಲ್ಲಿಯವರೆಗೆ ರೂ.9891.22 ಕೋಟಿಯಷ್ಟು (ಸುಂಕ ಸಂಗ್ರಹಣೆ, ನಿಶ್ಚಿತ ಠೇವಣಿಯಿಂದ ಬಂದ ಬಡ್ಡಿ, ಉಳಿತಾಯ ಖಾತೆಯಿಂದ ಬಂದ ಬಡ್ಡಿ, ನೋಂದಣಿ ಮತ್ತು ನವೀಕರಣದ ಶುಲ್ಕ ಸೇರಿದಂತೆ) ಮೊತ್ತವು ಸಂಗ್ರಹವಾಗಿರುತ್ತದೆ.<br><br>ಮಂಡಳಿಯಲ್ಲಿ ಸಂಗ್ರಹವಾದ ಕಲ್ಯಾಣ ನಿಧಿ ಮೊತ್ತವನ್ನು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ 1996 ರ ಕಲಂ 24(2)ರ ಪ್ರಾವಧಾನಗಳನ್ವಯ ಮಂಡಳಿ ನಿಧಿಯನ್ನು ಬಳಸಲಾಗುತ್ತಿದೆ.<br><br>ಮಂಡಳಿಯ ವಿವಿಧ ಸೌಲಭ್ಯಗಳನ್ನು ನೀಡಲು 2007 ರಿಂದ ಇಲ್ಲಿಯವರೆಗೆ ರೂ.2369.80 ಕೋಟಿಗಳಷ್ಟು ಖರ್ಚು ಮಾಡಿದ್ದು, 7521.42 ಕೋಟಿಯಷ್ಟು ಮೊತ್ತ ಉಳಿದಿರುತ್ತದೆ.<br><br>**2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ** ಯಾವುದೇ ರೀತಿಯ ನಿಧಿ ಸಂಗ್ರಹಿಸಲು ಅವಕಾಶವಿರುವುದಿಲ್ಲ.<br><br>3. **ಕಾರ್ಮಿಕ ಕಲ್ಯಾಣ ಮಂಡಳಿ:** ಈ ಮಂಡಳಿಯಲ್ಲಿ ಕಾರ್ಮಿಕ ಮತ್ತು ಮಾಲೀಕ 20:40 ರ ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ರೂ. 60/- ರಂತೆ ವರ್ಷಕ್ಕೆ ಒಂದು ಬಾರಿ ಸಂಘಟಿತ ಕಾರ್ಮಿಕರು ವಂತಿಗೆ ಪಾವತಿ ಮಾಡುತ್ತಿದ್ದು ಇದುವರೆಗೂ ಮಂಡಳಿಯಲ್ಲಿ ಕಾರ್ಮಿಕ ಕಲ್ಯಾಣ **ನಿಧಿ ರೂ. 148-00 ಕೋಟಿಗಳು** |

| | | |
|---|---|---|
| | | **ಸಂಗ್ರಹವಾಗಿರುತ್ತದೆ.**<br><br>ಇದರಲ್ಲಿ ಕಾರ್ಮಿಕ ಕಲ್ಯಾಣ ಯೋಜನೆಗಳು, ಆಡಳಿತಾತ್ಮಕ ವೆಚ್ಚ ಮತ್ತು ಮಂಡಳಿ ಆಸ್ತಿ ಅಭಿವೃದ್ಧಿಗಾಗಿ ಮಂಡಳಿ ಸಭೆಯ ನಿರ್ಣಯದಂತೆ ಖರ್ಚು ಮಾಡಲಾಗುತ್ತದೆ.<br><br>**2020-21ನೇ ಸಾಲಿನಲ್ಲಿ ಕಲ್ಯಾಣ ಯೋಜನೆಗಳಿಗಾಗಿ 11925 ಫಲಾನುಭವಿಗಳಿಗೆ ರೂ. 5.22 ಕೋಟಿ ವೆಚ್ಚ ಮಾಡಿರುತ್ತದೆ.**<br>**ಕಛೇರಿ ಆಡಳಿತಾತ್ಮಕ ವೆಚ್ಚ ರೂ. 4.88 ಕೋಟಿ ವೆಚ್ಚ ಮಾಡಿರುತ್ತದೆ.**<br>**ಒಟ್ಟು ರೂ. 10.10 ಕೋಟಿ ವೆಚ್ಚ ಮಾಡಲಾಗಿರುತ್ತದೆ. ಉಳಿದ ಹಣ ರೂ. 137.9 ಕೋಟಿ ಆಗಿರುತ್ತದೆ. ಇದನ್ನು ವಿವಿಧ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಠೇವಣಿ ಇರಿಸಲಾಗಿದೆ.** |
| ಈ) | ಕಾರ್ಮಿಕ ಸಹಾಯ ಹಸ್ತ ಯೋಜನೆ ಜಾರಿಯಲ್ಲಿದೆಯೇ; ಇದರ ರೂಪು ರೇಷೆಗಳೇನು; ಇದರ ಸಂಬಂಧ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ; ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಗೆ ನೇಮಕ ಮಾಡಿಕೊಂಡಿರುವವರ ಹೆಸರು, ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು; | 1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:** 'ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ' ಎಂಬ ಶೀರ್ಷಿಕೆಯಡಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಹಾಗೂ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಒಗ್ಗೂಡಿಸಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಸಂಬಂಧ 1086 ಕಾರ್ಮಿಕ ಬಂಧುಗಳನ್ನು ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಮಾಡಿಕೊಳ್ಳಲಾಗಿದೆ. ಪ್ರಸ್ತುತ 359 ಕಾರ್ಮಿಕ ಬಂಧುಗಳು ಸ್ವಯಂ ಸೇವಕರಾಗಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.<br><br>ಸದರಿ ಯೋಜನೆಯನ್ನು ಕಾರ್ಮಿಕ ಇಲಾಖೆ ಅಧಿಕಾರಿಗಳು ಅನುಷ್ಠಾನಗೊಳಿಸುತ್ತಿದ್ದು, ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಗೊಂಡ "ಕಾರ್ಮಿಕ ಬಂಧುಗಳು" ಇಲಾಖೆ ಮತ್ತು ಕಾರ್ಮಿಕರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. |

| | | |
|---|---|---|
| | | ತುಮಕೂರು ಜಿಲ್ಲೆಯಲ್ಲಿ ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ 62 ಕಾರ್ಮಿಕ ಬಂಧುಗಳು ನೇಮಕ ಗೊಂಡಿದ್ದು ಇದರಲ್ಲಿ ಪ್ರಸ್ತುತ 15 ಮಂದಿ ಕಾರ್ಮಿಕ ಬಂಧುಗಳು ಮಾತ್ರ ಕಾರ್ಯನಿರ್ವಹಿಸುತ್ತಿದ್ದು ಸದರಿಯವರ ಮಾಹಿತಿಯನ್ನು **ಅನುಬಂಧ-3 ರಲ್ಲಿ ಒದಗಿಸಿದೆ.**<br><br>**2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು** ಜಾರಿಗೊಳಿಸುತ್ತಿರುವ "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ" ಚಾಲ್ತಿಯಲ್ಲಿದೆ. ಸದರಿ ಯೋಜನೆಯಡಿ, 11 ವಲಯಗಳ ಅಸಂಘಟಿತ ಕಾರ್ಮಿಕರಾದ "ಹಮಾಲರು, ಗೃಹ ಕಾರ್ಮಿಕರು, ಟೈಲರ್ಸ್, ಚಿಂದಿ ಆಯುವವರು, ಮೆಕ್ಯಾನಿಕ್ಸ್, ಅಗಸರು, ಕ್ಷೌರಿಕರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿ ಕಾರ್ಮಿಕ ನೋಂದಣಿ ಮಾಡಿಕೊಂಡು ಸ್ಮಾರ್ಟ್‌ಕಾರ್ಡ್ ವಿತರಿಸಲಾಗುತ್ತಿದ್ದು ಅದರ ರೂಪುರೇಷೆಗಳು ಈ ಕೆಳಗಿನಂತಿವೆ:<br>• ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.<br>• ವಯೋಮಿತಿ 18 ರಿಂದ 60 ವರ್ಷಗಳು.<br>• ಯೋಜನೆಯಡಿ ನೋಂದಣಿಯಾಗಲು ಅರ್ಜಿದಾರರು ಅಸಂಘಟಿತ ಕಾರ್ಮಿಕರ ಕಾಯ್ದೆ 2008ರ ಅನುಸೂಚಿ 2ರ ಕಾಯ್ದೆಗಳಡಿ ಕರ್ತವ್ಯ ನಿರ್ವಹಿಸುತ್ತಿರಬಾರದು.<br>• ಈ ಯೋಜನೆಯಡಿ ನೋಂದಣಿಯಾಗಲು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಪೋರ್ಟಲ್‌ನಲ್ಲಿ www.ksuwssb.karnataka.gov.in ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು.<br>• ಸಲ್ಲಿಸಲಾದ ಅರ್ಜಿಯನ್ನು ನೊಂದಣಾಧಿಕಾರಿಗಳು ಪರಿಶೀಲಿಸಿ ಅರ್ಹರಿದ್ದಲ್ಲಿ ಸ್ಮಾರ್ಟ್ ಕಾರ್ಡ್ ವಿತರಿಸುತ್ತಾರೆ. |

<table>
<tr>
<td></td>
<td></td>
<td>ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯ ಅನುಷ್ಠಾನಕ್ಕಾಗಿ ಪ್ರತ್ಯೇಕವಾಗಿ ಯಾವುದೇ ಸಿಬ್ಬಂದಿಗಳನ್ನು ನೇಮಕಮಾಡಿಕೊಂಡಿರುವುದಿಲ್ಲ. ಆದರೆ, ಕಾರ್ಮಿಕ ಇಲಾಖೆ ಮತ್ತು ಅದರ ಅಧೀನ ಮಂಡಳಿ ಹಾಗೂ ಸೊಸೈಟಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಸಹಾಯವಾಗುವಂತೆ ರಾಜ್ಯದ 169 ತಾಲ್ಲೂಕುಗಳಲ್ಲಿ ಮಂಡಳಿಯ ಮೂಲಕ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮೂಲಕ ನೇಮಕಗೊಂಡ ಕಾರ್ಮಿಕ ಬಂಧುಗಳು ಕಾರ್ಯನಿರ್ವಹಿಸುತ್ತಿದ್ದಾರೆ.</td>
</tr>
<tr>
<td>ಉ)</td>
<td>ಇವರಿಗೆ ಸರ್ಕಾರವು ನೀಡುತ್ತಿರುವ ಸಹಾಯ/ಪ್ರೋತ್ಸಾಹ ಧನವೆಷ್ಟು?</td>
<td>1. <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u> ಕಾರ್ಮಿಕ ಬಂಧುಗಳು ಸ್ವಯಂ ಸೇವಕರಾಗಿ ಕಮೀಷನ್ ಆಧಾರದ ಮೇಲೆ ನೇಮಕಗೊಂಡು ಅವರು ಮಂಡಳಿಯ ಯೋಜನೆಯನ್ನು ಫಲಾನುಭವಿಗೆ ತಲುಪಿಸಿದಾಗ ಇವರುಗಳಿಗೆ ಸರ್ಕಾರಿ ಆದೇಶ ಸಂಖ್ಯೆ ಕಾಇ 467 ಎಲ್‌ಇಟಿ 2017 ಬೆಂಗಳೂರು ದಿನಾಂಕ 24-09-2018 ರ ಆದೇಶದನ್ವಯ ಪ್ರಸ್ತುತ ಕಮೀಷನ್ ನೀಡಲಾಗುತ್ತಿದೆ. ಪ್ರಸ್ತುತ ನೀಡುತ್ತಿರುವ ಕಮೀಷನ್ ಮಾಹಿತಿಯನ್ನು <u>ಅನುಬಂಧ-4 ರಲ್ಲಿ</u> ಒದಗಿಸಿದೆ.<br><br><u>2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಕಲ್ಯಾಣ ಮಂಡಳಿ:</u><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಸೌಲಭ್ಯವನ್ನು ಪಡೆಯಲು ಅಸಂಘಟಿತ ಕಾರ್ಮಿಕರಿಗೆ ಸಹಾಯ ನೀಡಿದಲ್ಲಿ, ಅಂತಹ ಕಾರ್ಮಿಕ ಬಂಧುಗಳಿಗೆ ಮಂಡಳಿಯಿಂದ ಕಮೀಷನ್ ನೀಡಲಾಗುತ್ತಿದ್ದು ವಿವರ ಈ ಕೆಳಗಿನಂತಿದೆ:-<br>1. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:
<table>
<tr><th>ಕ್ರ.ಸಂ.</th><th>ಉದ್ದೇಶ</th><th>ನಿಗದಿಪಡಿಸಿದ ದರ</th></tr>
<tr><td>01</td><td>ಚಾಲಕರಿಗೆ ಶ್ರಮ</td><td>ಪ್ರತಿ ಪ್ರಶಸ್ತಿಗೆ</td></tr>
</table>
</td>
</tr>
</table>

| | | |
|---|---|---|
| | ಸಮ್ಮಾನ ಮತ್ತು ವಿಶೇಷ ಪುರಸ್ಕಾರಕ್ಕಾಗಿ | ರೂ.700/- |
| 02 | ಚಾಲಕರು ಅಪಘಾತದಿಂದ ಮರಣ ಹೊಂದಿದ ಪ್ರಕರಣ. | ಪ್ರತಿ ಪ್ರಕರಣಕ್ಕೆ ರೂ.5000/- |
| 03 | ಆಸ್ಪತ್ರೆ ವೆಚ್ಚ ಮರುಪಾವತಿ | ಪ್ರತಿ ಪ್ರಕರಣಕ್ಕೆ ರೂ.1000/- |
| 04 | ಶಾಶ್ವತ ದುರ್ಬಲತೆ | ಪ್ರತಿ ಪ್ರಕರಣಕ್ಕೆ ರೂ.2000/- |
| 05 | ಅಪಘಾತದಿಂದ ಮರಣ ಹೊಂದಿದ/ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಚಾಲಕರ ಮಕ್ಕಳಿಗೆ ಶೈಕ್ಷಣಿಕ ಧನಸಹಾಯ. | ಪ್ರತಿ ಅರ್ಜಿಗೆ ರೂ.500/- |

2. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:

| ಕ್ರ.ಸಂ. | ಉದ್ದೇಶ | ನಿಗದಿಪಡಿಸಿದ ದರ |
|---|---|---|
| 1 | ಕಾರ್ಮಿಕ ಬಂಧುವಿಗೆ ಕಮೀಷನ್ (ಶ್ರಮ ಸಮ್ಮಾನ ಮತ್ತು ವಿಶೇಷ ಪುರಸ್ಕಾರಕ್ಕಾಗಿ ಕಾರ್ಮಿಕ ಬಂಧುವಿನ ಶಿಫಾರಸ್ಸಿನ ಮೇಲೆ ಆಯ್ಕೆಯಾದ ಅಸಂಘಟಿತ ಕಾರ್ಮಿಕರ ಸಂಖ್ಯೆಯ ಆಧಾರದ ಮೇಲೆ) | ಪ್ರತಿ ಪ್ರಶಸ್ತಿಗೆ ರೂ.200/- |
| 2 | ನೋಂದಣಿ ಕಮಿಷನ್ | ನೋಂದಣಿ ಸಹಾಯಕ್ಕಾಗಿ ಕಾರ್ಮಿಕ ಬಂಧುಗಳಿಗೆ ತಲಾ ರೂ.20/- ರ ದರದಲ್ಲಿ ಕಮಿಷನ್ |

ಸಂಖ್ಯೆ: ಕಾಇ 97 ಎಲ್‌ಇಟಿ 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

Scanned with CamSca

# ಅನುಬಂಧ-1

## (ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1348)

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿವತಿಯಿಂದ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ.
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಬಿತರಿಗೆ
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | ವಾರ್ಷಿಕ ಸಹಾಯ ಧನ | |
|---|---|---|---|
| | | ಗಂಡು | ಹೆಣ್ಣು |
| I. | ನರ್ಸರಿ | 3,000 | 4,000 |
| II. | 1 ರಿಂದ 4ನೇ ತರಗತಿ | 3,000 | 4,000 |
| III. | 5 ರಿಂದ 8ನೇ ತರಗತಿ | 5,000 | 6,000 |
| IV. | 9 ಹಾಗೂ 10ನೇ ತರಗತಿ | 10,000 | 11,000 |
| V. | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 10,000 | 14,000 |
| VI. | ಐಟಿಐ | 12,000 | 15,000 |
| VII. | ಪದವಿ ಪ್ರತಿ ವರ್ಷಕ್ಕೆ | 15,000 | 20,000 |
| VIII. | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 20,000 | 20,000 |
| | ಮತ್ತು ಪ್ರತಿ ವರ್ಷಕ್ಕೆ | 20,000 | 25,000 |
| IX. | ಇಂಜಿನಿಯರಿಂಗ್ ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ | 25,000 | 25,000 |
| | ಮತ್ತು ಪ್ರತಿ ವರ್ಷಕ್ಕೆ | 25,000 | 30,000 |
| X. | ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ | 30,000 | 30,000 |
| | ಮತ್ತು ಪ್ರತಿ ವರ್ಷಕ್ಕೆ | 40,000 | 50,000 |
| XI. | ಡಿಪ್ಲೋಮಾ | 15,000 | 20,000 |
| XII. | ಎಂ.ಟೆಕ್ / ಎಂ.ಇ | 30,000 | 35,000 |
| XIII. | ಎಂ.ಡಿ (ವೈದ್ಯಕೀಯ) | 45,000 | 55,000 |
| XIV. | ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ | 25,000 | 30,000 |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**

13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**

14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-** ವರೆಗೆ

15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**

16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್

17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ

18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ)

19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.

# ಅನುಬಂಧ-2

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1348

### ಕಾರ್ಮಿಕ ಕಲ್ಯಾಣ ಮಂಡಳಿಯ ಯೋಜನೆಗಳ ವಿವರ:

1. ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ: ಪ್ರೌಢ ಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.3,000/ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಇತ್ಯಾದಿ ರೂ.4,000/-ಪದವಿ ತರಗತಿಗೆ ರೂ.5,000/ ಸ್ನಾತಕೋತ್ತರ ಪದವಿ ತರಗತಿಗಳಿಗೆ ರೂ.6,000/- ಇಂಜಿನೀಯರಿಂಗ್/ವೈದ್ಯಕೀಯ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. (ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗ ಶೇ.50 ಪ.ಜಾ / ಪ.ಪಂ ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು)

2. ಕಾರ್ಮಿಕರಿಗೆ ವೈದ್ಯಕೀಯ ನೆರವು : ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ. 1,000/-ದಿಂದ ಗರಿಷ್ಠ ರೂ.10,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. 500/-ರಿಂದ ರೂ, 1000/-ವರೆಗೆ ಧನ ಸಹಾಯ ನೀಡಲಾಗುವುದು.

3. ಕಾರ್ಮಿಕರ ಅಪಘಾತ ಧನ ಸಹಾಯ : ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ. 1,000/- ಗರಿಷ್ಠ ರೂ 3,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4 ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ :ಈ ಯೋಜನೆಯ ಸೌಲಭ್ಯ ಪಡೆಯಬೇಕಾದರೆ ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತ ಪಟ್ಟ ಆರು ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ.5,000/- ಧನ ಸಹಾಯ ನೀಡಲಾಗುವುದು.

5. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ : ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ. 30,000/- ಧನ ಸಹಾಯ ನೀಡಲಾಗುವುದು. ಒಂದು ಸಂಘಟನೆಗೆ ವರ್ಷದಲ್ಲಿ ಒಂದು ಬಾರಿ ಮಾತ್ರ ಈ ಸೌಲಭ್ಯ ನೀಡಲಾಗುವುದು.

6 ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ : ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. 50,000/- ಧನ ಸಹಾಯ ನೀಡಲಾಗುವುದು. ವರ್ಷದಲ್ಲಿ ಒಂದು ಸಂಘಟನೆಗೆ ಒಂದು ಬಾರಿ ಮಾತ್ರ ಈ ಸೌಲಭ್ಯ ನೀಡಲಾಗುವುದು.

## ಅನುಬಂಧ-3

### ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1348

### ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮಾಹಿತಿ

### ತುಮಕೂರು ಜಿಲ್ಲೆಯಲ್ಲಿ ಪ್ರಸ್ತುತ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕ ಬಂಧುಗಳ ವಿವರ

| ಕ್ರಸಂ | ಕಾರ್ಮಿಕ ಬಂಧುಗಳ ಹೆಸರು | ಗ್ರಾಮ ಪಂಚಾಯತಿ/ ವಾರ್ಡ್ ಹೆಸರು |
|---|---|---|
| 1 | ನರಸಿಂಹಮೂರ್ತಿ ಬಿ.ಜಿ ಬಿನ್ ಗಂಗನರಸಯ್ಯ | ಬೇಗೂರು ಗ್ರಾಮ ಪಂಚಾಯತ್, ಕುಣಿಗಲ್ |
| 2 | ನಂಜುಂಡಸ್ವಾಮಿ ಬಿನ್ ರಂಗಯ್ಯ | ಸಾಸಲು ಗ್ರಾಮ ಪಂಚಾಯತ್, ತುರುವೇಕೆರೆ |
| 3 | ನರಸಿಂಹಾರಜು ಎನ್.ಡಿ ಬಿನ್ ದ್ಯಾವರಪ್ಪ | ನೀರಕಲ್ಲು ಗ್ರಾಮ, ಮಧುಗಿರಿ |
| 4 | ರಮೇಶ್ ಆರ್. ಬಿನ್ ರಾಮಣ್ಣ | ಅರಸಾಪುರ ಗ್ರಾಮ , ಕೊರಟಗೆರೆ |
| 5 | ಪ್ರದೀಪ್ ಕುಮಾರ್ | ಶಿರಾ ಟೌನ್, ಶಿರಾ |
| 6 | ಪುರುಷೋತ್ತಮ್. ವಿ | ಜ್ಯೋತಿನಗರ, ಶಿರಾ |
| 7 | ಐಶ್ವರ್ಯ ಸಿ. ಬಿನ್ ಚಿಕ್ಕಣ್ಣ .ಎಚ್ | ಸಾರ್ಥವಳ್ಳಿ, ತಿಪಟೂರು |
| 8 | ಶ್ರೀಮತಿ ಭಾಗ್ಯ ಲಕ್ಷ್ಮೀ | ಪಾವಗಡ |
| 9 | ಶಿವ ಕುಮಾರ್ ಎ ಬಿನ್ ಆನಂದ್ ಗೌಡ | ವಾರ್ಡ್ ನಂ-22, ತುಮಕೂರು |
| 10 | ಆನಂದ್.ಕೆ. ಬಿನ್ ಕೃಷ್ಣಪ್ಪ | ಪಾಲಸಂದ್ರ ಗ್ರಾಮ ಪಂಚಾಯಿತಿ ತುಮಕೂರು |
| 11 | ಹೇಮಾವತಿ ಕೋಂ ಬಿ ಹೆಚ್ ರಾಜು | ಸ್ವಾಂದೆನಹಳ್ಳಿ ಗ್ರಾಮ ಪಂಚಾಯಿತಿ, ತುಮಕೂರು |
| 12 | ರಾಕೇಶ್ ಎಸ್ ಬಿನ್ ಸುರೇಶ | ಹೆಗ್ಗೆರೆ ಗ್ರಾಮ ಪಂಚಾಯಿತಿ, ತುಮಕೂರು |
| 13 | ನಂಜೇಶ್ ಬಿನ್ ಲೇಟ್ ರಾಜಣ್ಣ | ಅಮೃತೂರು ಗ್ರಾಮ ಪಂಚಾಯಿತಿ, ಕುಣಿಗಲ್ |
| 14 | ಹಟ್ಟಿ ರಂಗಯ್ಯ ಆರ್. ಎನ್ ಬಿನ್ ನಂಜಪ್ಪ | ಮಡಿಕೆಹಳ್ಳಿ ಗ್ರಾಮ ಪಂಚಾಯಿತಿ, ಕುಣಿಗಲ್ |
| 15 | ನರಸಿಂಹಮೂರ್ತಿ ಬಿನ್ ಕದರಯ್ಯ | ದೊಡ್ಡಗುಣಿ ಗ್ರಾಮ ಪಂಚಾಯತ್, ಗುಬ್ಬಿ |

## ಅನುಬಂಧ-4

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1348**

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಾರ್ಮಿಕ ಬಂಧುಗಳಿಗೆ ನೀಡುತ್ತಿರುವ ಕಮೀಷನ್ ಮೊತ್ತದ ವಿವರ**

| ಕ್ರಮ ಸಂಖ್ಯೆ | ವಿವರ | ಪ್ರಸ್ತಾಪಿತ ಕಮೀಷನ್ ದರ |
|---|---|---|
| 1 | ಸಮೀಕ್ಷೆ ಹಾಗೂ ನೋಂದಣಿ ಸೇರಿದಂತೆ ಸ್ಮಾರ್ಟ್ ಕಾರ್ಡ್ ಪೂರ್ಣ ವಿತರಣೆ | ರೂ.25/- ಪ್ರತಿ ನೋಂದಣಿಗೆ |
| 2 | ಸಮೀಕ್ಷೆ ಹಾಗೂ ಸದಸ್ಯತ್ವ ನವೀಕರಣ ಅಥವಾ ಬದಲಿಸುವಿಕೆ (ಸ್ಮಾರ್ಟ್ ಕಾರ್ಡ್ ಅಥವಾ ಗುರುತಿನ ಪತ್ರವನ್ನು ಕಳೆದುಕೊಂಡಲ್ಲಿ/ ಹಾನಿಗೊಳಗಾದಲ್ಲಿ) | ರೂ.10/- ಪ್ರತಿ ನವೀಕರಣ ಅಥವಾ ಬದಲಾವಣೆಗೆ - |
| 3 | ವಂತಿಗೆ ಅಥವಾ ಚಂದಾ ಶುಲ್ಕ ಸಂಗ್ರಹಣೆ | ವಂತಿಗೆ ಅಥವಾ ಚಂದಾ ಶುಲ್ಕ ಸಂಗ್ರಹಣೆಯ ಶೇ.2 |
| 4 | ಕ್ಲೇಮ್ ನಮೂನೆ ಸಲ್ಲಿಕೆ ಪ್ರಕ್ರಿಯೆ ಹಾಗೂ ಶುಲ್ಕ ಸಂಗ್ರಹಣೆ, ಎಲ್ಲಾ ಕ್ಲೇಮ್ ಅರ್ಜಿಗಳನ್ನು ಪಡೆಯುವುದು ಹಾಗೂ ಸೌಲಭ್ಯ ತಲುಪಿಸುವುದು. | ರೂ.2/- ಪ್ರತಿ ನಮೂನೆಗೆ |
| 5 | ಕ್ಲೇಮ್ ಅರ್ಜಿಗಳ ಸಂಸ್ಕರಣೆ ಮತ್ತು ಫಲಾನುಭವಿಗಳಿಗೆ ಸೌಲಭ್ಯ ತಲುಪಿಸುವುದು. | ಮಂಜೂರಾದ ಪರಿಹಾರ ಮೊತ್ತದ ಶೇ.2ರಷ್ಟು |
| 6 | IEC ಚಟುವಟಿಕೆಗಳು ಹಾಗೂ ತರಬೇತಿಗೆ ಅಥವಾ ಕೌಶಲ್ಯ ಅಭಿವೃದ್ಧಿಗೆ ಕಾರ್ಮಿಕರ ನೋಂದಣಿ. | ರೂ.50/- ಪ್ರತಿ ನೋಂದಣಿಗೆ |
| 7 | ಕಟ್ಟಡ ಕಾಮಗಾರಿಗಳ ಸಮೀಕ್ಷೆ ಹಾಗೂ ಸ್ಥಳೀಯ ಸಂಸ್ಥೆಗಳಿಂದ ಕಟ್ಟಡ ನಿರ್ಮಾಣದ ಆದೇಶದ ಪ್ರತಿ ಸಂಗ್ರಹಣೆ | ರೂ.10/- ಪ್ರತಿ ದಾಖಲೆಗೆ |